**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.268/2021**

ಪಿ.ಡಬ್ಲ್ಯೂ: 2

ಸಿ.ಡಬ್ಲ್ಯೂ: 2

ಸಾಕ್ಷಿದಾರರ ಹೆಸರು : ಕಿರಣ್

ತಂದೆ ಹೆಸರು : ಶೇಖರ್

ವಯಸ್ಸು : 27 ವರ್ಷ

ಉದ್ಯೋಗ : ವ್ಯವಸಾಯ

**ವಾಸಸ್ಥಳ** : ಕರಕುಚ್ಚಿ

**ದಿನಾಂಕ: 06-07-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ವರ್ಷಗಳ ಹಿಂದೆ ಲಕ್ಕವಳ್ಳಿಯ ಪೊಲೀಸ್ ಠಾಣೆಯ ಹತ್ತಿರ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-3 ರಲ್ಲಿ ತಮ್ಮ ಇರುವಿಕೆಯನ್ನು ಗುರುತಿಸಿರುವುದಿಲ್ಲ .

**( ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: **24-06-2020** ರಂದು ಮಧ್ಯಾಹ್ನ **3-45** ರಿಂದ **4-45** ಗಂಟೆಯವರೆಗೆ ಲಕ್ಕವಳ್ಳಿ ಹೋಬಳಿ, ಕರಕುಚ್ಚಿ ಗ್ರಾಮದ ಸೋಮಣ್ಣನವರ ಅಡಿಕೆ ತೋಟದ ಬಳಿ ಇರುವ ಭದ್ರಾ ಹೊಳೆಯಲ್ಲಿ ಆರೋಪಿತರು ಅಕ್ರಮವಾಗಿ ಮರಳನ್ನು ಟ್ರಾಕ್ಟರ್ ನಲ್ಲಿ ತುಂಬುತ್ತಿರುವ ವಿಚಾರವಾಗಿ

ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನೀವು ಸಹಿ ಮಾಡಿರುತ್ತೀರಾ ಎಂದರೆ ಸಾಕ್ಷಿ ಸಹಿ ಮಾಡಿರುತ್ತೇನೆ, ಆದರೆ ಅದರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ಆ ಸಮಯದಲ್ಲಿ ಪೊಲೀಸರು ನಿಮ್ಮ ಸಮಕ್ಷಮದಲ್ಲಿ ಎರಡು ಟ್ರಾಕ್ಟರ್ ನಲ್ಲಿರುವ ಮರಳನ್ನು ಮತ್ತು ಒಂದು ಕೆಜಿ ಯಷ್ಟು ಶ್ಯಾಂಪಲ್ ಗಾಗಿ ಮರಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ನೀವು ಸ್ಥಳದಲ್ಲಿ ಸಹಿ ಮಾಡಿದ್ದು, ಠಾಣೆಯಲ್ಲಿ ಸಹಿ ಮಾಡಿರುತ್ತೇನೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.</u>**

ಪಾಟೀ ಸವಾಲು ಇರುವುದಿಲ್ಲ

**<u>ಮರುವಿಚಾರಣೆಃ</u>** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**